ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಗುರುವಾರ, ದಿನಾಂಕ : 12 ನೇ ಮಾರ್ಚ್, 2020

ಕಾನೂನು ಬಾಹಿರವಾಗಿ ಪೆಟ್ರೋಲ್, ಡೀಸಲ್ ವಿತರಣೆ ಮಾಡುತ್ತಿರುವವರ ಬಗ್ಗೆ

ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :-

749 (896) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ಹಾಗೂ ಇತರೆ ಮಹಾನಗರ ಪಾಲಿಕೆ ವ್ಯಾಪ್ತಿಗಳಲ್ಲಿ ಕಾನೂನು ಬಾಹಿರವಾಗಿ ಡೀಸಲ್ ಮತ್ತು ಪೆಟ್ರೋಲ್‌ನ್ನು ವಾಟರ್ ಟ್ಯಾಂಕ್‌ಗಳ ಮೂಲಕ ಸಾರ್ವಜನಿಕ ಸ್ಥಳಗಳಲ್ಲಿ ಸ್ಕೂಲ್ ಪಕ್ಕದಲ್ಲಿ ರಸ್ತೆಗಳಲ್ಲಿ ವಿತರಣೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಾದ್ದಲ್ಲಿ, ಇದುವರೆವಿಗೂ ಸರ್ಕಾರ ಕಾನೂನುಬಾಹಿರÀ ಚಟುವಟಿಕೆಗಳ ಮೂಲಕ ಪೆಟ್ರೋಲ್, ಡೀಸಲ್ ಸರಬರಾಜು ಮಾಡುತ್ತಿರುವವರ ಮೇಲೆ ಕೈಗೊಂಡಿರುವ ಕ್ರಮಗಳೇನು;

(ಇ) ಎಷ್ಟು ಮಂದಿ ಮೇಲೆ ಇದುವರೆವಿಗೂ ಯಾವ ಕ್ರಮ ಕೈಗೊಳ್ಳಲಾಗಿದೆ; ಈ ಸಂಬಂಧ ಎಷ್ಟು ಪ್ರಕರಣ ದಾಖಲಾಗಿದೆ;

(ಈ) ಸದರಿ ಕಾನೂನುಬಾಹಿರ ಚಟುವಟಿಕೆಯನ್ನು ಖಾಯಂ ಆಗಿ ನಿಯಂತ್ರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು)